107

5

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವ್ಹಿ.ಸಂಕನೂರ, ಶ್ರೀ ಎಸ್.ಎಲ್. ಭೋಜೇಗೌಡ ಶ್ರೀ ಪುಟ್ಟಣ್ಣ, ಶ್ರೀ ಶಶೀಲ್ ಜಿ ನಮೋಶಿ, ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) ಹಾಗೂ ಶ್ರೀ ರಾಮೋಜಿಗೌಡ ರವರು ಮಂಡಿಸಿರುವ ನಿಯಮ 72 ರ ಗಮನ ಸೆಳೆಯುವ ಸೂಚನೆಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಹೇಳಿಕೆ:**

***

**ವಿಷಯ:** ಇತ್ತೀಚಿನ ದಿನಗಳಲ್ಲಿ ಸರ್ಕಾರ ಸ್ವತಂತ್ರ ಅಸ್ತಿತ್ವ ಹಾಗೂ ಸ್ವಾಯತ್ತತೆ ಹೊಂದಿರುವ ಪದವಿ ಪೂರ್ವ ನಿರ್ದೇಶನಾಲಯಕ್ಕೆ ಧಕ್ಕೆ ತರುವ ರೀತಿಯಲ್ಲಿ ಕಾಲಕಾಲಕ್ಕೆ ಹಲವಾರು ಸುತ್ತೋಲೆಗಳನ್ನು ಹೊರಡಿಸುತ್ತಿರುವ ಹಿನ್ನಲೆಯಲ್ಲಿ ಪದವಿಪೂರ್ವ ಉಪನ್ಯಾಸಕರು ಆತಂಕಕ್ಕೆ ಒಳಗಾಗಿ ದಿನಾಂಕ:28-11-2025 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಸಿದ ಧರಣಿ ಸತ್ಯಾಗ್ರಹದ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸಳೆಯುವುದು.

## ಉತ್ತರ

ರಾಜ್ಯದಲ್ಲಿ ಒಟ್ಟು 1319 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿದ್ದು, ಬೋಧನಾ ಕಲಿಕಾ ಚಟುವಟಿಕೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಸಂಬಂಧ ಮಾಹಿತಿ ಸಂಗ್ರಹಣೆಯ ಅವಶ್ಯಕತೆ ಇರುತ್ತದೆ. ಪದವಿ ಪೂರ್ವ ಶಿಕ್ಷಣ ಹಂತದಲ್ಲಿ ಶೈಕ್ಷಣಿಕ ಚಟುವಟಿಕೆಗಳ ಅಂದರೆ ಬೋಧನಾ-ಕಲಿಕಾ ಪ್ರಕ್ರಿಯೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ತಾಲ್ಲೂಕು ಹಂತದಲ್ಲಿ, ವಿಭಾಗೀಯ ಹಂತದಲ್ಲಿ ಅಧಿಕಾರಿಗಳ ಕೊರತೆ ಇರುವ ಕಾರಣ, ಶಾಲಾ ಶಿಕ್ಷಣ ಇಲಾಖೆಯ ಅಂಗಸಂಸ್ಥೆಯಾದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (DIET) ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ಉಪನ್ಯಾಸಕರಿಂದ ಮಾಹಿತಿಯನ್ನು ಸಂಗ್ರಹಿಸುವ ಸಲುವಾಗಿ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ರವರು ಸುತ್ತೋಲೆ ಹೊರಡಿಸಿರುತ್ತಾರೆ.

ಪರೀಕ್ಷಾ ಫಲಿತಾಂಶ ಸುಧಾರಣೆ, ಪರಿಹಾರಾತ್ಮಕ ತರಗತಿಗಳನ್ನು ಶಿಸ್ತುಬದ್ಧವಾಗಿ ತೆಗೆದುಕೊಳ್ಳುವವರು, ಮಾದರಿ ಪ್ರಶ್ನೆಪತ್ರಿಕೆಗಳು, ಪ್ರಶ್ನೆಕೋಠಿ ಮತ್ತು ನೀಲನಕ್ಷೆಯ ಬಗ್ಗೆ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ನೀಡುವುದರಿಂದ ಫಲಿತಾಂಶ ಸುಧಾರಣೆಯಾಗುವುದು ಎಂಬ ಅಂಶಗಳ ಹಿನ್ನಲೆಯಲ್ಲಿ ಮಾಹಿತಿ ಸಂಗ್ರಹಿಸಲಾಗುತ್ತಿದೆ. ದಾಖಲಾತಿ ಹೆಚ್ಚಿಸುವ ಸಲುವಾಗಿ ಪೋಷಕ-ಶಿಕ್ಷಕರ ಸಭೆಯನ್ನು ಕರೆದಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಲಾಗುತ್ತದೆ. ಮಾಹಿತಿಯನ್ನು ಸಂಗ್ರಹಿಸಲು ಸಿದ್ಧಪಡಿಸಿರುವ ನಮೂನೆಯಂತೆ ಮಾಹಿತಿಯನ್ನು ಸಂಗ್ರಹಿಸುವರು ಹಾಗೂ ಶೈಕ್ಷಣಿಕ ಚಟುವಟಿಕೆಗಳ ಪ್ರಶ್ನಾವಳಿಗಳಿಗೆ ಸಂಬಂಧಿಸಿದಂತೆ ಹೌದು / ಇಲ್ಲ ಹಾಗೂ ಸಂಕ್ಷಿಪ್ತ ಮಾಹಿತಿಯನ್ನು ಮಾತ್ರ ಸಂಗ್ರಹಿಸಲಾಗುವುದು.

...2

ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಶೈಕ್ಷಣಿಕ ಗುಣಮಟ್ಟವನ್ನು ಸುಧಾರಣೆ ಮಾಡುವ ಉದ್ದೇಶದಿಂದ ಈಗಾಗಲೇ ಸುತ್ತೋಲೆಯಲ್ಲಿ ತಿಳಿಸಿರುವಂತೆ ಮಾಹಿತಿಯನ್ನು ಪ್ರಾಂಶುಪಾಲರ ಸಮಕ್ಷಮದಲ್ಲಿ ಸಂಗ್ರಹ ಮಾಡುವುದರಿಂದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಮತ್ತು ಪ್ರಾಂಶುಪಾಲರು ಸ್ವತಂತ್ರವಾಗಿ ಕೆಲಸ ನಿರ್ವಹಿಸಲು ಯಾವುದೇ ಅಡಚಣೆ ಉಂಟಾಗುವುದಿಲ್ಲ.

ದಿನಾಂಕ:18.10.2025ರಂದು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಶೈಕ್ಷಣಿಕ ಸ್ಥಿತಿಗತಿಗಳ ಮಾಹಿತಿಯನ್ನು ಸಂಗ್ರಹಿಸುವ ಕುರಿತು ಹೊರಡಿಸಲಾದ ಸುತ್ತೋಲೆಗೆ ಸಂಬಂಧಿಸಿದಂತೆ, ನಿರ್ದೇಶಕರ ನೇತೃತ್ವದಲ್ಲಿ ಎರಡು ಬಾರಿ ಮತ್ತು ಸಚಿವರ ಅಧ್ಯಕ್ಷತೆಯಲ್ಲಿ ಒಂದು ಬಾರಿ ಪ್ರಾಂಶುಪಾಲರ ಮತ್ತು ಉಪನ್ಯಾಸಕರ ಸಂಘದೊಂದಿಗೆ ಸಮಾಲೋಚನ ಸಭೆ ನಡೆಸಿ, ಸುತ್ತೋಲೆ ಸಂಬಂಧ ಸ್ಪಷ್ಟೀಕರಣವನ್ನು ನೀಡಲಾಗಿದೆ.

ದಿನಾಂಕ:31.10.2025ರಂದು ಸದರಿ ಸುತ್ತೋಲೆಯಲ್ಲಿ ಕೆಳಕಂಡಂತೆ ಬದಲಾವಣೆಯನ್ನು ತರಲಾಗಿದೆ.

1. ಈ ಮಾಹಿತಿ ಸಂಗ್ರಹಣ ಪ್ರಕ್ರಿಯೆಯಲ್ಲಿ DIETನ ಹಿರಿಯ ಉಪನ್ಯಾಸಕರಿಗೆ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಅಥವಾ ಪ್ರಾಂಶುಪಾಲರ ಮೇಲೆ ಯಾವುದೇ ಮೇಲ್ವಿಚಾರಣೆ ಅಥವಾ ನಿಯಂತ್ರಣ ಇರುವುದಿಲ್ಲ.
2. ಇಲಾಖೆಯಿಂದ DIETನ ಹಿರಿಯ ಉಪನ್ಯಾಸಕರಿಗೆ ನೀಡಲಾದ ಪ್ರಶ್ನಾವಳಿಗಳನ್ನು ಮೀರಿ ಯಾವುದೇ ಮಾಹಿತಿಯನ್ನು ಕೇಳಬಾರದು.
3. ಸಂಪೂರ್ಣ ಮಾಹಿತಿ ಸಂಗ್ರಹಣ ಪ್ರಕ್ರಿಯೆಯನ್ನು ಸಂಬಂಧ ಪಟ್ಟ ಕಾಲೇಜಿನ ಪ್ರಾಂಶುಪಾಲರ ಸಮ್ಮುಖದಲ್ಲಿ ಮಾಡಬೇಕು.
4. ಭರ್ತಿಮಾಡಲಾದ ಪ್ರಶ್ನಾವಳಿಯ ಒಂದು ಪ್ರತಿಯನ್ನು ಪ್ರಾಚಾರ್ಯರಿಗೆ ನೀಡುವುದು.

ಆದ್ದರಿಂದ ಈ ಸುತ್ತೋಲೆಯಿಂದ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಉಪನ್ಯಾಸಕರು ಆತಂಕಕ್ಕೆ ಒಳಗಾಗುವ ಪ್ರಮೇಯವಿರುವುದಿಲ್ಲ.

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಸಂಖ್ಯೆ: ಇಪಿ 414 ಡಿಜಿಡಬ್ಲ್ಯೂ 2025